ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ನೀರಾವರಿ ನಿಗಮಗಳಿಗೆ ಬಿಡುಗಡೆಯಾದ ಮೊತ್ತದ ಬಗ್ಗೆ ಮಾಹಿತಿ ಕುರಿತು

ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ) -

317 (477) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ನೀರಾವರಿ ನಿಗಮಗಳು ಯಾವುವು;

(ಆ) ಕಳೆದ 2 ವರ್ಷಗಳಿಂದ ಸದರಿ ನಿಗಮಗಳ ಕಾಮಗಾರಿ ಸಂಬಂಧ ಬಿಡುಗಡೆಯಾಗಿರುವ ಮೊತ್ತವೆಷ್ಟು; (ನಿಗಮವಾರು ವಿವರ ನೀಡುವುದು)

(ಇ) ಕಳೆದ 2 ವರ್ಷಗಳಿಂದ ನೀರಾವರಿ ನಿಗಮಗಳಲ್ಲಿ ಗುತ್ತಿಗೆದಾರರ ಬಾಕಿಯನ್ನು ಯಾವ ಯಾವ ಲೆಕ್ಕ ಶೀರ್ಷಿಕೆಯಡಿ, ಎಷ್ಟು ಮೊತ್ತದ ಹಣವನ್ನು ಹಂಚಿಕೆ ಮಾಡಲಾಗಿದೆ; (ವಿವರ ನೀಡುವುದು)

(ಈ) ಹಂಚಿಕೆ ಮಾಡುವಲ್ಲಿ ಅನುಸರಿಸಲಾಗಿರುವ ಮಾನದಂಡಗಳೇನು; (ವಿವರ ನೀಡುವುದು)

(ಉ) ಮಾನದಂಡಗಳನ್ನು ಅನುಸರಿಸದೆ ಹಣ ಹಂಚಿಕೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ನಿಯಮ ಪಾಲನೆ ಮಾಡದೆ ಹಣ ಹಂಚಿಕೆ ಮಾಡಿರುವ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?